# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
# ಕೆಂಗೇರಿ ಉಪ ವಿಭಾಗ, ವಾರ್ಡ್ ನಂ.198, ಹೆಮ್ಮಿಗೆಪುರ
# ವಾರ್ಡ್ ಸಮಿತಿ ಸಭೆ ದಿನಾಂಕ: 19/12/2020 ರ
# ಸಭಾ ನಡವಳಿ

ದಿನಾಂಕ: 19/12/2020 ರಂದು ಬೆಳಿಗ್ಗೆ 11.00 ಗಂಟೆಗೆ ವಾರ್ಡ್ ನಂ.198, ಹೆಮ್ಮಿಗೆಪುರ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಪಟ್ಟಣಗೆರೆ, ಬಿ.ಬಿ.ಎಂ.ಪಿ. ಸಮುದಾಯಭವನ ಕಟ್ಟಡದಲ್ಲಿ ನಡೆದ ವಾರ್ಡ್ ಸಮಿತಿಯ ಸಭೆಯ ನಡವಳಿಗಳು

<u>ಹಾಜರಿದ್ದವರು:</u>

| ಕ್ರ ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳಿ | ಹುದ್ದೆ |
|---|---|---|
| 1 | ಶ್ರೀ ಶಿವಕುಮಾರ್ | ನೋಡಲ್ ಅಧಿಕಾರಿ, ವಾರ್ಡ್ ನಂ.198(ಹೆಮ್ಮಿಗೆಪುರ) ಹಾಗೂ ಕಾರ್ಯಪಾಲಕ ಅಭಿಯಂತರರು, ಉಪ ನಿರ್ದೇಶಕರ ಕಛೇರಿ ಕಟ್ಟಡ ಪರವಾನಗೆ ಕೋಶ–ಉತ್ತರ |
| 2 | ಶ್ರೀ ದಯಾನಂದ.ಎನ್ | ಸಹಾಯಕ ಅಭಿಯಂತರರು, ವಾರ್ಡ್–198, ಹೆಮ್ಮಿಗೆಪುರ |
| 3 | ಶ್ರೀ ಚಂದ್ರಶೇಖರ್.ಹೆಚ್ | ಸಹಾಯಕ ಅಭಿಯಂತರರು(ವಿದ್ಯುತ್) ಬೆಸ್ಕಾಂ |
| 4 | ಶ್ರೀ ಜಿ.ಇ. ಕೆಂಪೇಗೌಡ | ಕಿರಿಯ ಅಭಿಯಂತರರು(ವಿದ್ಯುತ್) ಬೆಸ್ಕಾಂ |
| 5 | ಶ್ರೀ ಸಿ.ವಿ. ಸೂರ್ಯನಾರಾಯಣ | ಜಲ ಪರಿವೀಕ್ಷಕರು ಬಿ.ಡಬ್ಲ್ಯೂ.ಎಸ್. ಎಸ್.ಬಿ. |
| 6 | ಶ್ರೀಮತಿ ಮೋನಿಕಾ | ಕಿರಿಯ ಆರೋಗ್ಯ ಪರಿವೀಕ್ಷಕರು |
| 7 | ಶ್ರೀ ಮೋತಿಲಾಲ್ ಚೌಹಾನ್ | ವಾರ್ಡ್ ಮಾರ್ಷಲ್ |
| 8 | ಶ್ರೀ ಕೃಷ್ಣ ನಾಯಕ್ | ಕೆಲಸ ಪರಿವೀಕ್ಷಕರು ವಾರ್ಡ್–198, ಬಿ.ಬಿ.ಎಂ.ಪಿ |



Scanned with CamScanner

ಶ್ರೀ ದಯಾನಂದ.ಎನ್, ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ಹಿಂದಿನ ಸಭಾ ನಡವಳಿಯನ್ನು ಓದಿ ರೆಕಾರ್ಡ್ ಮಾಡಲಾಯಿತು ಮತ್ತು ತೆಗೆದುಕೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

❖ <u>ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ</u>:- ಅಧ್ಯಕ್ಷರು, ಕೋವಿಡ್-19ರ ಸಾಂಕ್ರಾಮಿಕ ರೋಗದ ಬಗ್ಗೆ ಹಾಗೂ ಸರ್ಕಾರ ಮತ್ತು ಬಿ.ಬಿ.ಎಂ.ಪಿ. ವತಿಯಿಂದ ನೀಡುತ್ತಿರುವ ಸೌಲಭ್ಯ/ಸೌವಲತ್ತುಗಳು ಹಾಗೂ ಕೋವಿಡ್ ಪರಿವೀಕ್ಷಣೆಯಿಂದ ಮೊದಲುಗೊಂಡು ಆಸ್ಪತ್ರೆಗೆ ದಾಖಲಾಗುವವರೆಗೆ ಮತ್ತು ಕೋವಿಡ್-19 ಪರೀಕ್ಷೆಯ ಬಗ್ಗೆ ಸವಿಸ್ತಾರವಾಗಿ ಸಭೆಗೆ ವಿವರಿಸಿದರು. ಕೋವಿಡ್-19ರ ಪರೀಕ್ಷೆಯನ್ನು ಹೆಚ್ಚು ಮಾಡುವ ಬಗ್ಗೆ ಸಹಕರಿಸುವಂತೆ ಸಭೆಯಲ್ಲಿದ್ದ ವೆಲ್‌ಫೇರ್ ಅಸೋಸಿಯೇಷನ್ ಅಧ್ಯಕ್ಷರುಗಳು ಮತ್ತು ಅಧಿಕಾರಿ ವರ್ಗದವರಿಗೆ ವಿನಂತಿಸಿ, ಆರೋಗ್ಯ ಪರಿವೀಕ್ಷಕರು ಮತ್ತು ಆರೋಗ್ಯಾಧಿಕಾರಿಗಳು ಸದರಿಯವರನ್ನು ಸಂಪರ್ಕಿಸಿ ಸಹಕಾರ ಪಡೆದುಕೊಳ್ಳಲು ಸೂಚಿಸಿದರು ಮತ್ತು ಮಾಷಲ್‌ಗಳನ್ನು ನಿಯೋಜಿಸಿ ಮಾಸ್ಕ್ ಧರಿಸದೇ ಇರುವವರಿಗೆ ದಂಡವನ್ನು ವಿಧಿಸಲು ಸೂಚಿಸಲಾಯಿತು.

❖ <u>ಅರಣ್ಯ ಇಲಾಖೆ, ಬಿ.ಬಿ.ಎಂ.ಪಿ</u>:- ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಿದ್ಯುತ್ ದೀಪಗಳ ಕೆಳಗೆ ಮರಗಳು ಬೆಳೆದಿದ್ದು, ರಸ್ತೆಗೆ ಸರಿಯಾಗಿ ಬೆಳಕು ಬೀಳದೇ ಕತ್ತಲು ಆವರಿಸಿ ರಾತ್ರಿ ವೇಳೆಯಲ್ಲಿ ಸಾರ್ವಜನಿಕರ ಓಡಾಟಕ್ಕೆ ತೊಂದರೆಯಾಗಿರುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ರಸ್ತೆ ಬದಿಯಲ್ಲಿ ಬೆಳೆದಿರುವ ಮರಗಳು ವಿದ್ಯುತ್ ದೀಪಗಳಿಗೆ ಅಡ್ಡಲಾಗಿ ಬೆಳೆದಿದ್ದು, ಬಿ.ಬಿ.ಎಂ.ಪಿ. ಅರಣ್ಯ ಇಲಾಖೆಯ ವತಿಯಿಂದ ಅಂತಹ ಸ್ಥಳಗಳಲ್ಲಿ ಮರಗಳನ್ನು ಟ್ರಿಮ್ ಮಾಡಲಾಗುವುದೆಂದು ಸಭೆಯ ಗಮನಕ್ಕೆ ತಂದರು ಹಾಗೂ ಇಂತಹ ಸ್ಥಳಗಳ ಮಾಹಿತಿಯನ್ನು ಮುಂದಿನ ಸಭೆಯಲ್ಲಿ ಪಟ್ಟಿಮಾಡಿ ನೀಡಲು ಸಭೆಗೆ ಕೋರಲಾಯಿತು.

❖ <u>ಬೃಹತ್ ನೀರುಗಾಲುವೆ ವಿಭಾಗ, ಬಿಬಿಎಂಪಿ</u>:- ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಿಜಯಶ್ರೀ ಬಡಾವಣೆಯಲ್ಲಿ ಬೃಹತ್ ನೀರುಗಲುವೆಗೆ ತಡೆಗೋಡೆಯನ್ನು ನಿರ್ಮಾಣ ಮಾಡಲಾಗುತ್ತಿದ್ದು, ತಡೆಗೋಡೆಯ ಪಕ್ಕದಲ್ಲಿ ಬಿದ್ದಿರುವ ಮಣ್ಣಿನ ರಾಶಿಯನ್ನು ಹರಡಿ ಸಮತಟ್ಟು ಮಾಡಿ ಸಾರ್ವಜನಿಕರ ಸಂಚಾರಕ್ಕೆ ಅನುಕೂಲ ಮಾಡಬೇಕಾಗಿ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ನೋಡಲ್

Scanned with CamScanner

ಅಧಿಕಾರಿಗಳು ಮಾತನಾಡಿ ಸಂಬಂಧಿಸಿದ ಬೃಹತ್ ನೀರುಗಾಲುವೆ ಅಧಿಕಾರಿಗಳಿಗೆ ಕೋರಲಾಗುವುದೆಂದು ಸಭೆಯ ಗಮನಕ್ಕೆ ತಿಳಿಸಲಾಯಿತು.

❖ <u>**ವಿದ್ಯುತ್ ಬೀದಿ ದೀಪಗಳ ನಿರ್ವಹಣೆ:-**</u> ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಮೈಲಸಂದ್ರ ಬಿ.ಇ.ಎಂ.ಎಲ್. ಬಡಾವಣೆಯಲ್ಲಿ ಹಾಲಿ ಇರುವ ವಿದ್ಯುತ್ ಬೀದಿ ದೀಪಗಳು ಕಾರ್ಯ ನಿರ್ವಹಿಸುತ್ತಿರುವುದಿಲ್ಲವೆಂದು ಮತ್ತು ಪಟ್ಟಣಗೆರೆ ಮುಖ್ಯ ರಸ್ತೆಯಲ್ಲಿ ವೃಷಭಾವತಿ ನದಿಗೆ ನಿರ್ಮಾಣ ಮಾಡಿರುವ ಸೇತುವೆಯ ಉದ್ದಕ್ಕೂ ವಿದ್ಯುತ್ ಬೀದಿ ದೀಪ ಅಳವಡಿಸದಿರುವುದು, ಇದರಿಂದಾಗಿ ಕಳ್ಳತನ ಹಾಗೂ ಸರಗಳ್ಳತನದಂತಹ ಅಪರಾಧ ಕೃತ್ಯಗಳು ಸಂಭವಿಸುತ್ತಿದ್ದು, ಹೊಸದಾಗಿ ವಿದ್ಯುತ್ ಬೀದಿ ದೀಪಗಳನ್ನು ಅಳವಡಿಸಲು ಸಭೆಯಲ್ಲಿ ಕೋರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ವಿದ್ಯುತ್ ಗುತ್ತಿಗೆದಾರರು ಸಭೆಗೆ ಗೈರುಹಾಜರಾಗಿರುವುದು ಕಂಡು ಬಂದಿದ್ದು, ಸದರಿ ಸಮಸ್ಯೆಯನ್ನು ಪರಿಹರಿಸಲು ಸಂಬಂಧಿಸಿದ ವಿದ್ಯುತ್ ವಿಭಾಗದ ಅಭಿಯಂತರರ ಗಮನಕ್ಕೆ ತರಲಾಗುವುದೆಂದು ಸಭೆಯ ಗಮನಕ್ಕೆ ತರಲಾಯಿತು.

❖ <u>**ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಗಮ:-**</u> ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಸಾವನ್ ದರ್ಬಾರ್ ಆಶ್ರಮದ ಮುಂಭಾಗ ರಸ್ತೆಯಲ್ಲಿ ರಸ್ತೆಯ ಮಧ್ಯದಲ್ಲಿ ವಿದ್ಯುತ್ ಕಂಬಗಳು ವಾಹನ ಸಂಚಾರಕ್ಕೆ ಅಡಚಣೆ ಇದ್ದು ವಿದ್ಯುತ್ ಕಂಬಗಳನ್ನು ರಸ್ತೆಯ ಪಕ್ಕಕ್ಕೆ ಸ್ಥಳಾಂತರಿಸಲು ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ಬೆಸ್ಕಾಂ ಅಧಿಕಾರಿಗಳು ಮಾತನಾಡಿ ಸದರಿ ಬಡಾವಣೆಯು ಖಾಸಗಿ ಬಡಾವಣೆಯಾಗಿದ್ದು, ವಿದ್ಯುತ್ ಕಂಬಗಳನ್ನು ನಿಗಧಿತ ಸ್ಥಳದಲ್ಲಿ ಇರುವುದು ಬಡಾವಣೆ ನಿರ್ಮಾಣ ಮಾಡಿದ ಡೆವೆಲಪರ್‌ಗಳ ಆಧ್ಯ ಕರ್ತವ್ಯವಾಗಿದ್ದು, ಸದರಿ ವಿದ್ಯುತ್ ಕಂಬಗಳನ್ನು ಸ್ಥಳಾಂತರಿಸಲು ನಿಗಧಿತ ಶುಲ್ಕವನ್ನು ಬಡಾವಣೆಯ ವತಿಯಿಂದ ಪಾವತಿಸಿದ್ದಲ್ಲಿ ಸ್ಥಳಾಂತರಿಸಲು ಕ್ರಮ ತೆಗೆದುಕೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.

❖ <u>**ಸಂಚಾರಿ ಪೊಲೀಸ್ ಠಾಣೆ, ಕೆಂಗೇರಿ:-**</u> ವಾರ್ಡ್ ನಂ.198ರಲ್ಲಿ ವ್ಯಾಪ್ತಿಯಲ್ಲಿ ಬರುವ ಕೆಂಗೇರಿ ಉತ್ತರಹಳ್ಳಿ ಮುಖ್ಯರಸ್ತೆಯ ವೃಷಭಾವತಿ ನದಿಯ ಪಕ್ಕದಲ್ಲಿ ಬರುವ ಪೆಟ್ರೋಲ್ ಸಂಜೀವಪ್ಪ ರಸ್ತೆಯಲ್ಲಿ ಮಲ್ಟಿ ಆ್ಯಕ್ಸಲ್ ಲಾರಿಗಳು ಮತ್ತು ಎಂ.ಆರ್.ಪಿ. ವೈನ್ ಸ್ಟೋರ್ ಮುಂಭಾಗ ವಾಹನಗಳು ನಿಲುಗಡೆ ಮಾಡುತ್ತಿದ್ದು, ಇದರಿಂದ ಬಡಾವಣೆಯ ಮಹಿಳೆಯರಿಗೆ ಮತ್ತು ವಾಹನ ಸವಾರರಿಗೆ ತೀವ್ರ ತೊಂದರೆಯಾಗುತ್ತಿದ್ದು, ಅಪಘಾತವಾಗುವ ಸಂಭವವಿರುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ವಾಹನಗಳ ಅನಧಿಕೃತ ನಿಲುಗಡೆಗಳ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಸಂಚಾರಿ ಪೊಲೀಸ್ ಸಿಬ್ಬಂದಿಯವರಿಗೆ ಕ್ರಮಕೈಗೊಳ್ಳಲು ಕೋರಲಾಗುವುದೆಂದು ಸಭೆಗೆ ತಿಳಿಸಿದರು.

Scanned with CamScanner

❖ <u>ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ</u>:- 1) ವಾರ್ಡ್ ನಂ.198ರ ಕೆಂಪೇಗೌಡ ರಸ್ತೆ-ಕಾನ್‌ಕಾರ್ಡ್ ರಸ್ತೆ ಡಾಂಬರೀಕರಣ ಆಗದಿರುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ಸದರಿ ರಸ್ತೆಯು ಬೃಹತ್ ರಸ್ತೆ ವಿಭಾಗಕ್ಕೆ ಒಳಪಡುವುದೆಂದು ಸಭೆಯ ಗಮನಕ್ಕೆ ತಂದರು.

2) ವಾರ್ಡ್ ನಂ.198ರ ಕೆಂಚೇನಹಳ್ಳಿ ಮುಖ್ಯ ರಸ್ತೆಯಲ್ಲಿ ರಸ್ತೆ ಬಿದಿಯ ಚರಂಡಿಯಲ್ಲಿ ಹೂಳು ತುಂಬಿದ್ದು, ಕೆಲವು ಸ್ಥಳಗಳಲ್ಲಿ ತೆರವುಗೊಳಿಸಿದ್ದು, ಇನ್ನೂ ಕೆಲವು ಸ್ಥಳಗಳಲ್ಲಿ ತೆರವುಗೊಳಿಸದೇ ಇರುವುದು ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ಸದರಿ ರಸ್ತೆಯು ಬೃಹತ್ ರಸ್ತೆ ವಿಭಾಗಕ್ಕೆ ಒಳಪಟ್ಟಿದ್ದು, ಈಗಾಗಲೇ ಸಂಬಂಧಿಸಿದ ಅಭಿಯಂತರರೊಂದಿಗೆ ಸ್ಥಳಪರಿಶೀಲನೆ ನಡೆಸಲಾಗಿದ್ದು, ಚರಂಡಿಯ ಹೂಳನ್ನು ತೆರವುಗೊಳಿಸಿಕೊಡಲು ಸೂಚಿಸಿರುವುದಾಗಿ ಸಭೆಯ ಗಮನಕ್ಕೆ ತಂದರು.

3) ವಾರ್ಡ್ ನಂ.198ರ ಬಿ.ಹೆಚ್.ಇ.ಎಲ್. ಬಡಾವಣೆಯ ಮುಖ್ಯ ಹಾಗೂ ಅಡ್ಡರಸ್ತೆಗಳಲ್ಲಿ ವಾಹನಗಳ ಅಪಘಾತಗಳು ಸಂಭವಿಸುತ್ತಿದ್ದು, ರಸ್ತೆ ಉಬ್ಬುಗಳನ್ನು ನಿರ್ಮಾಣ ಮಾಡಲು ಸಭೆಯ ಗಮನಕ್ಕೆ ತರಲಾಯಿತು ಹಾಗೂ ಸದರಿ ವಿಷಯದ ಬಗ್ಗೆ ಹಲವು ಭಾರಿ ಮನವಿ ಸಲ್ಲಿಸಲಾಗಿರುವ ಬಗ್ಗೆ ಸಭೆಯ ಗಮನಕ್ಕೆ ತಂದರು. ಈ ಸಂಭಂಧ ನೋಡಲ್ ಅಧಿಕಾರಿಗಳು ಮಾತನಾಡಿ ಈಗಾಗಲೇ ಹಲವುಭಾರಿ ಟ್ರಾಫಿಕ್ ಇಂಜಿನಿಯರಿಂಗ್ ಸೆಲ್ ವಿಭಾಗದವರಿಗೆ ಹಲವಾರು ಭಾರಿ ಮನವಿಮಾಡಿದ್ದು, ಮನವಿ ಪತ್ರವನ್ನು ಸಹ ನೀಡಲಾಗಿರುವ ಬಗ್ಗೆ ಸಭೆಯ ಗಮನಕ್ಕೆ ತಂದರು ಹಾಗೂ ಸದರಿ ವಿಷಯದ ಬಗ್ಗೆ ಸ್ಥಳದಲ್ಲೇ ದೂರವಾಣಿ ಕರೆಯ ಮೂಲಕ ಸಂಪರ್ಕಿಸಲಾಗಿ ಸಾರ್ವಜನಿಕರಿಂದ ಹೊಸದಾಗಿ ಒಂದು ಮನವಿಯನ್ನು ಸಲ್ಲಿಸುವಂತೆ ಸೂಚಿಸಿದ ವಿಷಯವನ್ನು ಸಭೆಯ ಗಮನಕ್ಕೆ ತರಲಾಯಿತು. ರಸ್ತೆ ಉಬ್ಬು ಬೇಕಾಗಿರುವ ಸ್ಥಳದ ವಿವರ ಹಾಗೂ ರಸ್ತೆಯ ವಿವರದೊಂದಿಗೆ ಮನವಿ ಸಲ್ಲಿಸಲು ಕೋರಲಾಯಿತು.

| | |
|---|---|
| (ದಯಾನಂದ.ಎನ್) | (ಶಿವಕುಮಾರ್) |
| ಕಾರ್ಯದರ್ಶಿ | ನೋಡಲ್ ಅಧಿಕಾರಿ |
| ಹಾಗೂ ಸಹಾಯಕ ಅಭಿಯಂತರರು | ವಾರ್ಡ್ ಸಮಿತಿ |
| ವಾರ್ಡ್-198, ಹೆಮ್ಮಿಗೆಪುರ | ವಾರ್ಡ್-198, ಹೆಮ್ಮಿಗೆಪುರ |

ಪ್ರತಿಯನ್ನು:-

1) ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ ರವರ ಕಛೇರಿಗೆ ಸಲ್ಲಿಸಿದೆ.
2) ಕೌನ್ಸಿಲ್ ಕಾರ್ಯದರ್ಶಿ, ಬಿ.ಬಿ.ಎಂ.ಪಿ. ಕೇಂದ್ರ ಕಛೇರಿ ರವರ ಅವಗಾಹನೆಗೆ ಸಲ್ಲಿಸಿದೆ.
3) ಜಂಟಿ ಆಯುಕ್ತರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
4) ಮುಖ್ಯ ಅಭಿಯಂತರರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.

Scanned with CamScanner

5) ಅಧೀಕ್ಷಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
6) ಕಾರ್ಯಪಾಲಕ ಅಭಿಯಂತರರು (ಕೆಂಗೇರಿ ವಿಭಾಗ) ರವರ ಅವಗಾಹನೆಗೆ ಸಲ್ಲಿಸಿದೆ.
7) ಕಂದಾಯ ಅಧಿಕಾರಿಗಳು (ಕೆಂಗೇರಿ ವಲಯ) ರವರ ಮಾಹಿತಿಗಾಗಿ ಕಳುಹಿಸಿದೆ.
8) ಕಾರ್ಯಪಾಲಕ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ, ರಾಜರಾಜೇಶ್ವರಿನಗರ ವಿಭಾಗ) ರವರ ಅವಗಾಹನೆಗೆ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
10) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
11) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
12) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
13) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಯೋಜನಾ (110 ಹಳ್ಳಿಗಳು) ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

Scanned with CamScanner